ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿಶ್ವ ವಿದ್ಯಾಲಯಗಳು ಹಾಗೂ ದೂರ ಶಿಕ್ಷಣ ಕಾರ್ಯಕ್ರಮಗಳ ಬಗ್ಗೆ

ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-

752 (993) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸಾಂಪ್ರದಾಯಿತ ಹಾಗೂ ಇತರೆ ವಿಶ್ವವಿದ್ಯಾಲಯಗಳು ಎಷ್ಟು ; ಅವು ಯಾವುವು ;

(ಆ) ಸದರಿ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಯಾವ ಯಾವ ವರ್ಷಗಳಿಂದ ದೂರಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ ; (ವಿಶ್ವವಿದ್ಯಾಲಯಗಳವಾರು ಮಾಹಿತಿ ನೀಡುವುದು)

(ಇ) ಇತ್ತೀಚೆಗೆ ಸರ್ಕಾರವು ದೂರಶಿಕ್ಷಣ ಕಾರ್ಯಕ್ರಮವನ್ನು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಮಾತ್ರ ಮುಂದುವರೆಸುವಂತೆ ಆದೇಶ ಮಾಡಿ ಇತರೆ ವಿಶ್ವವಿದ್ಯಾಲಯಗಳಲ್ಲಿ ಈ ಕಾರ್ಯಕ್ರಮಗಳನ್ನು ರದ್ದುಗೊಳಿಸಿರುವುದು ಸರಿಯೇ ;

(ಈ) ಹಾಗಾದರೆ, ರಾಜ್ಯದಲ್ಲಿ ಉನ್ನತ ಶಿಕ್ಷಣ ಪಡೆಯಬೇಕೆಂಬ ಹಂಬಲವಿರುವ ದೂರಶಿಕ್ಷಣ ವಿದ್ಯಾರ್ಥಿಗಳ ಭವಿಷ್ಯವೇನು ; ಸರ್ಕಾರವು ಈ ಆದೇಶವನ್ನು ರದ್ದುಗೊಳಿಸಿ, ಮೊದಲಿನಂತೆಯೇ ಮುಂದುವರೆಸಲು ಕ್ರಮಕೈಗೊಳ್ಳುವುದೇ ?